# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 521 (827) |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 26.12.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ<br>ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಹತ್ತು ವರ್ಷದಿಂದ ಇಲ್ಲಿಯವರೆಗೆ ಬೀದರ್ ಜಿಲ್ಲೆಯಲ್ಲಿರುವ ಹಲವು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಮೂಲಭೂತ ಸೌಕರ್ಯವಿಲ್ಲದೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಲ್ಲಿ ಅಂತಹ ಎಷ್ಟು ಶಾಲೆಗಳಿವೆ; (ಪ್ರತ್ಯೇಕ ತಾಲ್ಲೂಕುವಾರು ವಿವರ ನೀಡುವುದು) | ಬಂದಿರುತ್ತದೆ.<br><br>ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳು ಹೊಂದಿರುವ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿ ವರದಿ ಸಲ್ಲಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ: ಇಡಿ 24 ಎಸ್ ಇ ಎಸ್ 2022, ದಿನಾಂಕ:19.07.2022 ರಲ್ಲಿ 5 ಜನರ ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ಅಂತಹ ಶಾಲಾ-ಕಾಲೇಜುಗಳನ್ನು ಪರಿಶೀಲಿಸುತ್ತಿದೆ. |
| ಆ) | ಸರ್ಕಾರವು ಒಂದು ವರ್ಷದೊಳಗಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸದ ಶಾಲೆಗಳನ್ನು ರದ್ದು ಮಾಡುವುದಾಗಿ ಘೋಷಿಸಿದ್ದು ಈ ಘೋಷಣೆಯಂತೆ ಕ್ರಮವಹಿಸಿದೆಯೇ; | |
| ಇ) | ಸದರಿ ಶಾಲೆಗಳಲ್ಲಿ ಅನೇಕ ಹುದ್ದೆಗಳು ಖಾಲಿ ಇದ್ದು ಅವುಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದ ಅನುಮತಿಯ ಅವಶ್ಯಕತೆ ಇದ್ದು ಇದಕ್ಕೆ ಸರ್ಕಾರ ಅನುಮತಿ ನೀಡುವುದು ಯಾವಾಗ; ನೀಡದಿದ್ದಲ್ಲಿ ಅದಕ್ಕೆ ಕಾರಣವೇನು? | ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಹೆಚ್ಚುವರಿ ಎಂದು ಗುರುತಿಸಲಾಗುವ ಶಿಕ್ಷಕರುಗಳಿಂದ ಭರ್ತಿ ಮಾಡಲಾಗುತ್ತಿದೆ. ಖಾಸಗಿ ಅನುದಾನಿತ ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br>ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿತ್ತು. ಆದರೆ, ಆರ್ಥಿಕ ಇಲಾಖೆಯು ದಿನಾಂಕ:19.10.2022 ರಂದು |

| | | |
|---|---|---|
| | | ನೀಡಿರುವ ಅಭಿಪ್ರಾಯದಲ್ಲಿ ದಿನಾಂಕ:31.12.2015ರ ಅಂತ್ಯಕ್ಕೆ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆಧ್ಯತೆ ನೀಡುವಂತೆ ತಿಳಿಸಿರುತ್ತದೆ. ಆದ್ದರಿಂದ, ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ: ಇಪಿ 654 ಎಸ್‌ಇಎಸ್ 2022**

**(ಬಿ.ಸಿ.ನಾಗೇಶ್)**
**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ**
**ಸಕಾಲ ಸಚಿವರು.**